# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತ್ತಿಲ್ಲದ ಪ್ರಶ್ನೆ ಸಂಖ್ಯೆ | 2376 |
| ಸದಸ್ಯರ ಹೆಸರು | ಶ್ರೀ ಕೆ.ಹರೀಶ್ ಕುಮಾರ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವವರು | ಮಾನ್ಯ ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲ ಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಸಚಿವರು. |
| ಉತ್ತರಿಸಬೇಕಾದ ದಿನಾಂಕ | 22-03-2022 |

| ಕ್ರ ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಬಾಲ ಮಂದಿರಗಳಿಂದ 2021-22ನೇ ಸಾಲಿನಲ್ಲಿ ಕಾಣೆಯಾಗಿರುವ ಮಕ್ಕಳ ಸಂಖ್ಯೆ ಎಷ್ಟು; | 2021-22ನೇ ಸಾಲಿನ ಅಕ್ಟೋಬರ್-2021ರ ಅಂತ್ಯಕ್ಕೆ ಸರ್ಕಾರಿ ಬಾಲಮಂದಿರಗಳಿಂದ ಒಟ್ಟು 20 ಮಕ್ಕಳು ಕಾಣೆಯಾಗಿರುತ್ತಾರೆ.<br>ಸಂಬಂಧಿಸಿದ ಪೊಲೀಸ್ ಠಾಣೆಗಳಲ್ಲಿ ಎಫ್.ಐ.ಆರ್ ದಾಖಲಿಸಲಾಗಿದ್ದು, ಈ ಪೈಕಿ 07 ಮಕ್ಕಳನ್ನು ಪತ್ತೆ ಹಚ್ಚಲಾಗಿರುತ್ತದೆ. ಉಳಿದ 13 ಮಕ್ಕಳನ್ನು ಪತ್ತೆ ಹಚ್ಚಲು ಕ್ರಮ ವಹಿಸಲಾಗುತ್ತಿದೆ. |
| ಆ) | ಹಾಗಿದ್ದಲ್ಲಿ, ಕಾಣೆಯಾದ ಮಕ್ಕಳ ಬಗ್ಗೆ ತನಿಖೆಗೆ ಕ್ರಮ ಕೈಗೊಳ್ಳಲಾಗಿದೆಯೇ? (ಈ ಕುರಿತಂತೆ ಸಂಪೂರ್ಣ ವಿವರ ನೀಡುವುದು) | ಬಾಲಮಂದಿರಗಳಿಂದ ಕಾಣೆಯಾದ ಮಕ್ಕಳನ್ನು ಪತ್ತೆ ಹಚ್ಚಲು ಮಕ್ಕಳ ರಕ್ಷಣಾ ನಿರ್ದೇಶನಾಲಯದಿಂದ ಈ ಕೆಳಕಂಡ ಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>ಬೀದಿ ಬದಿ ವ್ಯಾಪಾರ, ಭಿಕ್ಷಾಟನೆ, ಬಾಲಕಾರ್ಮಿಕತೆ ಮುಂತಾದ ಸನ್ನಿವೇಶಕ್ಕೊಳಗಾದ ಮಕ್ಕಳನ್ನು ರಕ್ಷಿಸಲು ಕ್ಷೇತ್ರ ಮಟ್ಟದಲ್ಲಿ ವಿವಿಧ ಇಲಾಖೆಗಳು, ಸ್ವಯಂ ಸೇವಾ ಸಂಸ್ಥೆಗಳು ಮತ್ತು ಮಕ್ಕಳ ಉಚಿತ ಸಹಾಯವಾಣಿ ಸಂಖ್ಯೆ 1098 ಸಹಯೋಗದೊಂದಿಗೆ ಕೈಗೊಳ್ಳಲಾಗುವ ರೆಸ್ಕ್ಯೂ ಆಪರೇಷನ್‌ಗಳಲ್ಲಿ ಕಾಣೆಯಾಗಿರುವ ಮಕ್ಕಳು ಸಹ ಒಳಪಟ್ಟಿರುವ ಬಗ್ಗೆ ಪರಿಶೀಲಿಸಲಾಗುತ್ತಿದೆ.<br>ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ಯಡಿ ಮತ್ತು ಭಾರತ ಸರ್ಕಾರದಿಂದ ಕಾಣೆಯಾದ ಮಕ್ಕಳ ಕುರಿತು ಹೊರಡಿಸಿರುವ ನಿರ್ದಿಷ್ಟ ಕಾರ್ಯವಿಧಾನ NCPCR ರವರಿಂದ ಹೊರಡಿಸಿರುವ ಕಾರ್ಯವಿಧಾನದಲ್ಲಿ ಕಾಣೆಯಾದ ಮಕ್ಕಳನ್ನು ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ 04 ತಿಂಗಳ ಅವಧಿಯೊಳಗೆ ಸದರಿ ಮಗುವನ್ನು ಪತ್ತೆ ಹಚ್ಚಲು ಸಾಧ್ಯವಾಗದಿದ್ದಲ್ಲಿ, ಅಂತಹ ಪ್ರಕರಣಗಳನ್ನು ಮಾನವ ಕಳ್ಳ ಸಾಗಾಣಿಕೆ ನಿಗ್ರಹ ಘಟಕ (AHTU)ಗಳಿಗೆ ವರ್ಗಾಯಿಸಲು ತಿಳಿಸಲಾಗಿರುತ್ತದೆ.<br>ರಾಜ್ಯಾದ್ಯಂತ ಮಕ್ಕಳ ಸಂಬಂಧಿಸಿದ ವಿಷಯಗಳನ್ನು ಪ್ರತ್ಯೇಕವಾಗಿ ಆದ್ಯತೆ ಮೇರೆಗೆ ನಿರ್ವಹಿಸಲು ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ 2015ರ ಸೆಕ್ಷನ್ 107 ಮತ್ತು ಮಾದರಿ ನಿಯಮಗಳು 2016ರ ನಿಯಮ 86ರಡಿ ಎಲ್ಲಾ ಜಿಲ್ಲೆಗಳಲ್ಲಿ ಮಕ್ಕಳ ವಿಶೇಷ ಪೊಲೀಸ್ ಘಟಕಗಳನ್ನು ಸರ್ಕಾರದ ಒಳಾಡಳಿತ ಇಲಾಖೆಯಿಂದ ಆದೇಶ ಸಂಖ್ಯೆ:ಹೆಚ್‌ಡಿ 20 ಪಿಸಿಸಿ 2021 ದಿನಾಂಕ:29.06.2021ರನ್ವಯ ಜಿಲ್ಲಾ ಮಟ್ಟದಲ್ಲಿ ರಚಿಸಲಾಗಿದೆ. |

ಸಂಖ್ಯೆ: ಮಮಇ 42 ಮಭಾಬ 2022

(ಆಚಾರ್ ಹಾಲಪ್ಪ ಬಸಪ್ಪ)
ಗಣಿ ಮತ್ತು ಭೂ ವಿಜ್ಞಾನ, ಮಹಿಳಾ ಮತ್ತುಮಕ್ಕಳ
ಅಭಿವೃದ್ಧಿ ಹಾಗೂ ವಿಕಲಚೇತನರ ಹಾಗೂ
ಹಿರಿಯ ನಾಗರಿಕರ ಸಬಲೀಕರಣ ಸಚಿವರು.